ವರ್ಗದ 4 ಅಭ್ಯರ್ಥಿಗಳು ಆಯ್ಕೆಯಾಗಿ ಈ ಯೋಜನೆಯಡಿ ಧನ ಸಹಾಯ ಸೌಲಭ್ಯ ಪಡೆದು ವ್ಯಾಸಂಗ ಮಾಡುತ್ತಿದ್ದಾರೆ.

563 ಡಾ: ಮಹದೇವಪ್ಪ ಹೆಚ್.ಸಿ. (ಟಿ. ನರಸೀಪುರ (ಎಂ.ಎಲ್.ಎ.) ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಯನ್ನು ದಯವಿಟ್ಟು ಉತ್ತರಿಸುವರೆ?

ರಾಜ್ಯದಲ್ಲಿರುವ ಮುಸ್ಲಿಂ ಜನಸಂಖ್ಯೆ ಎಷ್ಟು; ಅವರುಗಳಲ್ಲಿರುವ ವಿದ್ಯಾವಂತರ ಸಂಖ್ಯೆ ಎಷ್ಟು ; ಅವರುಗಳಲ್ಲಿ ಎಷ್ಟು ಮಂದಿ ಪದವೀಧರರದ್ದಾರೆ; ಯಾವ ಯಾವ ವಿಷಯದಲ್ಲಿ ಪದವಿ ಪಡೆದಿದ್ದಾರೆ; ಅವರುಗಳಲ್ಲಿ ಮಹಿಳೆಯರ ಸಂಖ್ಯೆ ಎಷ್ಟು; ಇವರುಗಳ ವಿದ್ಯಾಭ್ಯಾಸಕ್ಕೆ ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಕೈಗೊಂಡಿರುವ ಅಭಿವೃದ್ಧಿ ಕ್ರಮಗಳೇನು ಎಂಬುದರ ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಮಗ್ರ ಮಾಹಿತಿ ಒದಗಿಸುವುದು?

ಶ್ರೀ ಪ್ರೊ.ಡಾ. ಮುಮ್ತಾಜ್ ಆಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

2001ರ ಜನಗಣತಿಯ ಪ್ರಕಾರ ರಾಜ್ಯದಲ್ಲಿನ ಮುಸ್ಲಿಂ ಜನಸಂಖ್ಯೆ: ---------- 64, 63, 127

ರಾಜ್ಯದ ಮುಸ್ಲಿಂ ವಿದ್ಯಾವಂತರ ಸಂಖ್ಯೆ ಲಭ್ಯವಿರುವುದಿಲ್ಲ ಆದರೆ, ಮುಸ್ಲಿಂ ಅಕ್ಷರಸ್ಥರ ಸಂಖ್ಯೆ ---------- 37, 99, 433 (59%)

ಒಟ್ಟು ಪದವಿಧರರ ಸಂಖ್ಯೆ ---------- 1, 44, 575 (2.23%)

ಮಹಿಳಾ ಪದವೀದರರ ಸಂಖ್ಯೆ ---------- 45, 180 (0.69%)

ಮುಸ್ಲಿಂ ಪದವೀದರರು ಪಡೆದಿರುವ ಪದವಿ ವಿಷಯದ ಬಗ್ಗೆ ಮಾಹಿತಿ ಲಭ್ಯವಿರುವುದಿಲ್ಲ.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅರಿವು ಯೋಜನೆಯಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಒಟ್ಟಾರೆ ರೂ. 2772.86 ಲಕ್ಷಗಳನ್ನು ವೃತ್ತಿಪರ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಸಾಲವಾಗಿ ಮಂಜೂರು ಮಾಡಲಾಗಿದೆ.

ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಅಲ್ಪಸಂಖ್ಯಾತರ ಜನರಿಗಾಗಿ ಅನುಬಂಧ-1ರಲ್ಲಿ ನೀಡಲಾಗಿರುವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ.

ವಿಧಾನಸಭೆ ಸದಸ್ಯರಾದ ಡಾ: ಮಹದೇವಪ್ಪ ಹೆಚ್.ಸಿ. ಯವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 563ಕ್ಕೆ ಅನುಬಂಧ – 1

1. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಡಿಯಲ್ಲಿರುವ ಯೋಜನೆಗಳು

ಅ) ಸ್ವಾವಲಂಬನೆ ಸಾಲ ಮತ್ತು ಸಹಾಯಧನ ಯೋಜನೆ

ಆ) ಅರಿವು (ವಿದ್ಯಾಭ್ಯಾಸ) ಸಾಲ ಯೋಜನೆ

ಇ) ಶ್ರಮಶಕ್ತಿ ಯೋಜನೆ

ಈ) ಗಂಗಾ ಕಲ್ಯಾಣ ಯೋಜನೆ

ಉ) ಮೈಕ್ರೋ ಸಾಲ ಮತ್ತು ಸಹಾಯಧನ ಯೋಜನೆ

2. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ನಿರ್ದೇಶನಾಲಯದಲ್ಲಿನ ಯೋಜನೆಗಳು

ಅ) ಸಮುದಾಯ ಭವನ, ಶಾದಿಮಹಲ್ ನಿರ್ಮಾಣ

ಆ) ಹಾಸ್ಟಲ್ ಕಟ್ಟಡ ನಿರ್ಮಾಣ

ಇ) ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಕಟ್ಟಡಗಳು

ಈ) ಅಲ್ಪಸಂಖ್ಯಾತರ ಸಂಸ್ಥೆಗಳಿಂದ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ

ಉ) ಹೊಸ ಮೊರಾರ್ಜಿ ದೇಸಾಯಿ ನಿವಾಸಿ ವಸತಿ ಶಾಲೆಗಳು

ಊ) ಅಲ್ಪಸಂಖ್ಯಾತರಿಗಾಗಿ ಕೌಶಲ್ಯ ಅಭಿವೃದ್ಧಿ ಯೋಜನೆ

ಋ) ಸರ್ಕಾರಿ ಅಲ್ಪಸಂಖ್ಯಾತರ ಶಾಲೆಗಳಿಗೆ ಶಿಕ್ಷಣ ಮತ್ತು ಕಲಿಕೆ ಸಾಧನೆಗಳು

ಎ) ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಉತ್ತೇಜನ

ಏ) ಅಲ್ಪಸಂಖ್ಯಾತರ ಹೊಸ ವಿದ್ಯಾರ್ಥಿನಿಲಯಗಳ ಪ್ರಾರಂಭ

564 ಡಾ: ಮಹದೇವಪ್ಪ ಹೆಚ್.ಸಿ. (ಟಿ. ನರಸೀಪುರ (ಎಂ.ಎಲ್.ಎ.) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಮದರಾಸಗಳಿವೆ? ಯಾವ ಯಾವ ಜಿಲ್ಲೆಗಳಿವೆ;

ಆ) ಈ ಮದರಾಸಗಳಲ್ಲಿ ಎಷ್ಟು ವಿದ್ಯಾರ್ಥಿಗಳು ಯಾವ ಯಾವ ತರಗತಿಗಳಲ್ಲಿ ಯಾವ ಯಾವ ವಿಷಯಗಳಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ;